# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಎನ್.ಎಸ್. ಬೋಸ್ ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 269 |
| ಉತ್ತರಿಸಬೇಕಾದ ದಿನಾಂಕ | : | 04/03/2020 |
| ಉತ್ತರಿಸಬೇಕಾದ ಸಚಿವರು | : | ಶ್ರೀ ವಿ. ಸೋಮಣ್ಣ, ವಸತಿ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆಗೆ 2019-20 ನೇ ಸಾಲಿನಲ್ಲಿ ವಸತಿ ಇಲಾಖೆಯ ವಿವಿಧ ವಸತಿ ಯೋಜನೆಗಳ ಮುಖಾಂತರ ಮಂಜೂರಾಗಿರುವ ಮನೆಗಳ ಸಂಖ್ಯೆ ಎಷ್ಟು; ನಿರ್ಮಾಣ ಮಾಡಿರುವ ಮನೆಗಳು ಎಷ್ಟು; ಇಲ್ಲಿಯವರೆಗೂ ಮಂಜೂರಾಗಿರುವ ಮನೆಗಳನ್ನು ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | 2019-20ನೇ ಸಾಲಿನಲ್ಲಿ ಸರ್ಕಾರದ ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ) ವಸತಿ ಯೋಜನೆಯಡಿ ಮಂಜೂರು ಮಾಡಲಾಗಿದ್ದ 2133 ಮನೆಗಳ ಪೈಕಿ 135 ಮನೆಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿದ್ದು ಉಳಿದ 1998 ಮನೆಗಳನ್ನು ಪ್ರಾರಂಭಿಸಬೇಕಾಗಿದೆ.<br><br>ರಾಜ್ಯ ಸರ್ಕಾರದ ವಸತಿ ಯೋಜನೆಗಳಡಿ 2019-20 ನೇ ಸಾಲಿಗೆ ಮನೆಗಳನ್ನು ಮಂಜೂರು ಮಾಡಿರುವುದಿಲ್ಲ.<br><br>➢ ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ) ಅಡಿಯಲ್ಲಿ ಪ್ರತಿ ಗ್ರಾಮ ಪಂಚಾಯಿತಿಗೆ ಒಬ್ಬ ಆವಾಸ್ ಮಿತ್ರನನ್ನು ನೇಮಕ ಮಾಡಲಾಗಿದ್ದು, ಸದರಿ ಅವಾಸ್ ಮಿತ್ರನು ಮನೆಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಫಲಾನುಭವಿಗಳಿಗೆ ಉತ್ತೇಜನವನ್ನು ನೀಡಿ ಮನೆಗಳನ್ನು ಶೀಘ್ರವಾಗಿ ಪೂರ್ಣಗೊಳಿಸುವಂತೆ ನೋಡಿಕೊಳ್ಳುತ್ತಾರೆ.<br>➢ ಫಲಾನುಭವಿಗಳನ್ನು ನಿಗದಿಪಡಿಸಲಾದ ಅವಧಿಯೊಳಗೆ ಆಯ್ಕೆ ಮಾಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿಗಮದಿಂದ ನಿರ್ದೇಶನ ನೀಡಲಾಗುತ್ತದೆ.<br>➢ ಅನುಮೋದನೆಗೊಂಡ 90 ದಿನಗಳೊಳಗಾಗಿ ಮನೆಗಳನ್ನು ಪ್ರಾರಂಭಿಸುವಂತೆ ಗ್ರಾಮ ಪಂಚಾಯಿತಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಿಂದ ತಿಳುವಳಿಕೆ ನೀಡಲಾಗುತ್ತಿದೆ.<br>➢ ಮನೆಯ ಪ್ರಗತಿಯ ಹಂತ ಪೂರ್ಣಗೊಂಡ ಕೂಡಲೇ ಜಿಪಿಎಸ್ ಮಾಡುವಂತೆ ಗ್ರಾಮ ಪಂಚಾಯಿತಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಿಗೆ ಸೂಚಿಸಲಾಗುತ್ತಿದೆ.<br>➢ ಮನೆಗಳ ನಿರ್ಮಾಣ ಪ್ರಗತಿಯನ್ನು ಸಾಧಿಸುವ ಬಗ್ಗೆ ನಿಗಮದಿಂದ ಪ್ರತಿ 15 ದಿನಕ್ಕೊಮ್ಮೆ ಜಿಲ್ಲಾಡಳಿತದೊಂದಿಗೆ ವಿಡಿಯೋ ಸಂವಾದವನ್ನು ನಡೆಸಲಾಗುತ್ತಿದೆ.<br>➢ ಅದರಂತೆಯೇ ಜಿಲ್ಲಾಡಳಿತ ಮತ್ತು ತಾಲ್ಲೂಕು / ನಗರ ಮಟ್ಟದಲ್ಲಿಯೂ ಮನೆಗಳ ಪ್ರಗತಿಯನ್ನು ಪರಿಶೀಲಿಸಿ ಮನೆಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಲು ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗುತ್ತಿದೆ. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಆ) | ರಾಯಚೂರು ನಗರದಲ್ಲಿರುವ ವಿವಿಧ ಕೊಳಚೆ ಪ್ರದೇಶಗಳಲ್ಲಿ ಮನೆಗಳನ್ನು ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ರಾಯಚೂರು ನಗರದ 5 ಕೊಳಚೆ ಪ್ರದೇಶಗಳಲ್ಲಿ ಪ್ರಧಾನ ಮಂತ್ರಿ ಆವಾಸ್ ಯೋಜನೆ 2016-17 ನೇ ಸಾಲಿನ ಹಂತ-2 ರಲ್ಲಿ 1050 ಮನೆಗಳು ಮಂಜೂರಾಗಿದ್ದು, 751 ಮನೆಗಳ ನಿರ್ಮಾಣ ಪೂರ್ಣಗೊಂಡಿದ್ದು, 262 ಮನೆಗಳ ನಿರ್ಮಾಣ ಕಾಮಗಾರಿಗಳು ಪ್ರಗತಿಯಲಿದ್ದು, ಪೂರ್ಣಗೊಳ್ಳುವ ಹಂತದಲ್ಲಿದೆ. ಉಳಿದ 37 ಮನೆಗಳನ್ನು ಪ್ರಾರಂಭಿಸಬೇಕಿದೆ.<br><br>ರಾಯಚೂರು ನಗರದ 6 ಕೊಳಚೆ ಪ್ರದೇಶಗಳಲ್ಲಿ ಪ್ರಧಾನ ಮಂತ್ರಿ ಆವಾಸ್ ಯೋಜನೆ 2017-18 ನೇ ಸಾಲಿನ ಹಂತ-3 ರಲ್ಲಿ 500 ಮನೆಗಳು ಮಂಜೂರಾಗಿದ್ದು, ಈ ಪೈಕಿ 300 ಮನೆಗಳ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದ್ದು, ಉಳಿದ ಮನೆಗಳನ್ನು ಅರ್ಹ ಫಲಾನುಭವಿಗಳಿಂದ ವಂತಿಕೆಯನ್ನು ಪಡೆದು ಪ್ರಾರಂಭಿಸಬೇಕಾಗಿದೆ.<br><br>ರಾಯಚೂರು ನಗರದಲ್ಲಿ ಇರುವ ಕೊಳಚೆ ಪ್ರದೇಶದ ನಿವಾಸಿಗಳಿಗೆ ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ) ಯಡಿ ಮನೆಗಳನ್ನು ನಿರ್ಮಿಸಿಕೊಡಲು ಯೋಜನಾ ವರದಿಗಳನ್ನು ತಯಾರಿಸಿ, ಕೇಂದ್ರ ಹಾಗೂ ರಾಜ್ಯ ಸರ್ಕಾರದ ಗುರಿ-ಅನುದಾನದ ಲಭ್ಯತೆಗೆ ಅನುಗಣವಾಗಿ ಹಂತ ಹಂತವಾಗಿ ಮನೆಗಳ ನಿರ್ಮಾಣ ಮಾಡಲು ಕ್ರಮ ವಹಿಸಲಾಗುತ್ತಿದೆ. |
| ಇ) | 2019-20 ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯ ಕೊಳಚೆ ಪ್ರದೇಶಗಳಿಗೆ ಮಂಜೂರು ಆಗಿರುವ ಮನೆಗಳು ಎಷ್ಟು? | 2019-20ನೇ ಸಾಲಿನಲ್ಲಿ ಮಂಜೂರು ಮಾಡಿಲ್ಲ. |

ವಇ 25 ಹೆಚ್‌ಎಎಂ 2020

(ವಿ. ಸೋಮಣ್ಣ)
ವಸತಿ ಸಚಿವರು.